**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ**

**ಸಿ.ಸಿ ನಂಬ್ರ: 1473-2019**

ಸರ್ಕಾರದ ಪರ
ಕುಂದಾಪುರ ಠಾಣಾ ಪೊಲೀಸರು. --- ಪಿರ್ಯಾದಿದಾರರು

-ಮತ್ತು-

1. ಭಾಸ್ಕರ ಕಾಂಚನ್, 40 ವರ್ಷ,
ತಂದೆ: ಮುದುರು,
ವಾಸ: ಮನೆ ನಂಬ್ರ. 178-1,
ದೊಡ್ಡೋಣಿ ರೋಡ್, ಬೀಜಾಡಿ,
ಕೋಟೇಶ್ವರ ಗ್ರಾಮ,
ಉಡುಪಿ ತಾಲೂಕು.

2. ಶ್ರೀಮತಿ ಗಾಯತ್ರಿ, 43 ವರ್ಷ,
ಗಂಡ: ಭಾಸ್ಕರ ಕಾಂಚನ್,
ವಾಸ: ಮನೆ ನಂಬ್ರ. 76-4,
ದೊಡ್ಡೋಣಿ ರೋಡ್, ಬೀಜಾಡಿ,
ಕೋಟೇಶ್ವರ ಗ್ರಾಮ,
ಕುಂದಾಪುರ ತಾಲೂಕು.

3. ಬಿಂದು ಬಿ. ಕಾಂಚನ್, 20 ವರ್ಷ,
ತಂದೆ: ಭಾಸ್ಕರ ಕಾಂಚನ್,
ವಾಸ: ಮನೆ ನಂಬ್ರ. 76-4,
ದೊಡ್ಡೋಣಿ ರೋಡ್, ಬೀಜಾಡಿ,
ಕೋಟೇಶ್ವರ ಗ್ರಾಮ,
ಕುಂದಾಪುರ ತಾಲೂಕು. --- ಆರೋಪಿತರು

**:ದೋಷಾರೋಪಣೆ:**

ಶ್ರೀಮತಿ ರೋಹಿಣಿ .ಡಿ. ಬಿ.ಎ., ಎಲ್ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ದೋಷಾರೋಪಣೆ ಏನೆಂದರೆ:

ಕುಂದಾಪುರ ಪೋಲಿಸ್ ಠಾಣಾ ಸರಹದ್ದಿನಲ್ಲಿ, ಜಾಗದ ವಿಚಾರದಲ್ಲಿನ ತಕರಾರಿನ ಕಾರಣ, ದಿನಾಂಕ 14.12.2018 ರಂದು ಬೆಳಿಗ್ಗೆ 09.00 ಗಂಟೆಯ ಸಮಯದಲ್ಲಿ ಕುಂದಾಪುರ ತಾಲೂಕು, ಬೀಜಾಡಿ ಗ್ರಾಮದ ದೊಡ್ಡೋಣಿ ರಸ್ತೆಯಲ್ಲಿರುವ ಸಾಕ್ಷಿ 1 ನೇಯವರ ವಾಸದ ಮನೆಯ ಅಂಗಳಕ್ಕೆ 1 ರಿಂದ 3 ನೇ ಆರೋಪಿತರಾದ ನೀವುಗಳು ತಕ್ಷೀರು ನಡೆಸುವ ಸಮಾನ ಉದ್ದೇಶದಿಂದ ಅಕ್ರಮವಾಗಿ ಪ್ರವೇಶ ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 447 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

2. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ 1 ರಿಂದ 3 ನೇ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ ಸಾಕ್ಷಿ 1 ನೇಯವರನ್ನು ಅಕ್ರಮವಾಗಿ ಅಡ್ಡಗಟ್ಟಿ ನಿಲ್ಲಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ

ಮಾಡಿರುವಿರಿ.

3. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ 1 ರಿಂದ 3 ನೇ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ ಆ ಪೈಕಿ 3 ನೇ ಆರೋಪಿತರಾದ ನೀವು ಕೈಯಿಂದ ಸಾಕ್ಷಿ 2 ನೇಯವರ ಬೆನ್ನಿಗೆ ಹೊಡೆದು ಸಾದಾ ಸ್ವರೂಪದ ಗಾಯವನ್ನು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

4. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ 1 ರಿಂದ 3 ನೇ ಆರೋಪಿತರಾದ ನೀವುಗಳು ಸಮಾನ ಉದ್ದೇಶದಿಂದ ಸಾಕ್ಷಿ 1 ನೇಯವರಿಗೆ ಕತ್ತಿಯನ್ನು ತೋರಿಸಿ ಇದರಿಂದಲೇ ನಿನ್ನನ್ನು ಕೊಂದು ಹಾಕುವೆವು ಎಂದು ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿ. 27.07.2022.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

Phs